**OS No. 240/2022**
**ಪಿ.ಡಬ್ಲ್ಯೂ: 1**

**ದಿನಾಂಕ : 04-06-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ. ಐ. ಎಮ್. ಆರ್. ವಕೀಲರಿಂದಃ**

ನಾನು ಈ ದಿನ ವಾದಿಯ ಪರವಾಗಿ ಅಧಿಕಾರ ಪತ್ರವನ್ನು ಹೊಂದಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ನಾನು ದಾವೆಯ ಜೊತೆಗೆ ಕೆಲವು ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ, ಅವು ಕೆಳಗಿನಂತಿವೆಃ

1. ದಾವಾ ಆಸ್ತಿಗೆ ಸಂಬಂಧಪಟ್ಟಂತಹ ಪಹಣಿಗಳನ್ನು ನಿಪಿ-1, 2, 4, 5 ಎಂದು ಗುರುತಿಸಲಾಯಿತು.
2. ದಿನಾಂಕಃ 29-04-2022 ನೇದ್ದರ ಖರೀದಿ ಪತ್ರದ ದೃಢಿಕೃತ ನಕಲನ್ನು ನಿಪಿ-3 ಎಂದು ಗುರುತಿಸಲಾಯಿತು.
3. ಅಧಿಕಾರ ಪತ್ರವನ್ನು ನಿಪಿ-6 ಎಂದು ಗುರುತಿಸಲಾಯಿತು.

**ವಾದಿಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆ ಸಮಯಾವಕಾಶ ಕೋರಿದ್ದರಿಂದ ಸಮಯಾವಕಾಶ ನೀಡಲಾಯಿತು.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ**